ಕಛೇರಿ ದೂರವಾಣಿ : +91 80 23354039
+91 80 23354085
ಇ-ಮೇಲ್: com-hfws@karnataka.gov.in

# ಆಯುಕ್ತಾಲಯ

## ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು

ಕನ್ನಡ ಕಾಯಕ ವರ್ಷಾಚರಣೆ

ಸಂಖ್ಯೆ:NVBDCP/EST7C/COVID19/2020-21 ದಿನಾಂಕ:03-03-2021

**ಸುತ್ತೋಲೆ**

ವಿಷಯ: ಕೇರಳ ಹಾಗೂ ಮಹಾರಾಷ್ಟ್ರ ರಾಜ್ಯಗಳಿಂದ ಬರುವ, ಸರಕು ಸಾಗಣೆ ವಾಹನಗಳ ಚಾಲಕರು ಹಾಗೂ ಸಹಾಯಕರುಗಳು ಕಡ್ಡಾಯವಾಗಿ ಆರ್‌ಟಿ – ಪಿಸಿಆರ್ ಪರೀಕ್ಷೆಯ ವರದಿಯನ್ನು ಹೊಂದುವ ಬಗ್ಗೆ.

ಉಲ್ಲೇಖ: ರಾಜ್ಯ ಮಟ್ಟದ ಕೋವಿಡ್ 19 ತಾಂತ್ರಿಕ ಸಲಹಾ ಸಮಿತಿಯ ೮೦ನೇ ಸಭಾ ನಡಾವಳಿಗಳು, ದಿನಾಂಕ: 01.03.2021.

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ನೆರೆಯ ಕೇರಳ ಹಾಗೂ ಮಹಾರಾಷ್ಟ್ರ ರಾಜ್ಯಗಳಲ್ಲಿ ಕೋವಿಡ್ 19 ಪ್ರಕರಣಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ, ವಿಶೇಷ ಸಮೀಕ್ಷಣಾ ಕ್ರಮಗಳನ್ನು ಈಗಾಗಲೇ ರಾಜ್ಯದಲ್ಲಿ ಕೈಗೊಳ್ಳಲಾಗುತ್ತಿದೆ. ಮುಂದುವರೆದು, ಕೇರಳ ಹಾಗೂ ಮಹಾರಾಷ್ಟ್ರ ರಾಜ್ಯಗಳಿಂದ ಬರುವ, ಅಗತ್ಯ ವಸ್ತುಗಳ ಸರಕು ಸಾಗಣೆಯ ವಾಹನಗಳ ಚಾಲಕರು ಹಾಗೂ ಸಹಾಯಕರುಗಳು 15 ದಿನಗಳಿಗೆ ಒಮ್ಮೆ ಆರ್‌ಟಿ – ಪಿಸಿಆರ್ ಪರೀಕ್ಷೆಗೆ ಒಳಪಡುವುದು ಹಾಗೂ ಪರೀಕ್ಷಾ ವರದಿ ಹೊಂದುವುದನ್ನು ಕಡ್ಡಾಯಗೊಳಿಸಲಾಗಿದೆ. ಸದರಿ ಪರೀಕ್ಷಾ ವರದಿಗಳನ್ನು ಹೊಂದಿದವರನ್ನು ಮಾತ್ರವೇ ರಾಜ್ಯಕ್ಕೆ ಪ್ರವೇಶಿಸಲು ಅವಕಾಶ ನೀಡುವುದು. ಇನ್ನುಳಿದಂತೆ, ರಾಜ್ಯದಲ್ಲಿ ಚಾಲ್ತಿಯಲ್ಲಿರುವ ಕೋವಿಡ್ 19 ಮುನ್ನೆಚ್ಚರಿಕಾ ಕ್ರಮಗಳನ್ನು ಪಾಲಿಸುವುದೂ ಸಹ ಕಡ್ಡಾಯವಾಗಿರುತ್ತದೆ.

ಆದ್ದರಿಂದ, ಕೋವಿಡ್ ನಿಯಂತ್ರಣಕ್ಕೆ ಸಂಬಂಧಪಟ್ಟಂತೆ, ಅಧಿಕಾರಿಗಳು ಸೂಕ್ತ ಕ್ರಮಗಳನ್ನು ಕೈಗೊಳ್ಳಲು ಸೂಚಿಸಿದೆ.

ಆಯುಕ್ತರು
**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು**

**ಪ್ರತಿಯನ್ನು,**

1. ಜಿಲ್ಲಾಧಿಕಾರಿಗಳು, ಎಲ್ಲಾ ಜಿಲ್ಲೆಗಳು
2. ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು – ಜಿಲ್ಲಾ ಪಂಚಾಯತ್ ,ಎಲ್ಲಾ ಜಿಲ್ಲೆಗಳು
3. ಜಿಲ್ಲಾ ಆರೋಗ್ಯಾಧಿಕಾರಿಗಳು, ಎಲ್ಲಾ ಜಿಲ್ಲೆಗಳು
4. ಮುಖ್ಯ ಆರೋಗ್ಯಾಧಿಕಾರಿಗಳು (ಸಾರ್ವಜನಿಕ ಆರೋಗ್ಯ), ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು
5. ಜಿಲ್ಲಾ ಸರ್ವೇಕ್ಷಣಾಧಿಕಾರಿಗಳು, ಎಲ್ಲಾ ಜಿಲ್ಲೆಗಳು.

ಪ್ರತಿಯನ್ನು ಮಾಹಿತಿಗಾಗಿ ಕಳುಹಿಸಿದೆ.

1. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
2. ವಿಶೇಷ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
3. ಅಭಿಯಾನ ನಿರ್ದೇಶಕರು, ರಾಷ್ಟ್ರೀಯ ಆರೋಗ್ಯ ಅಭಿಯಾನ, ಆರೋಗ್ಯ ಸೌಧ, ಬೆಂಗಳೂರು.
4. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆರೋಗ್ಯ ಸೌಧ, ಬೆಂಗಳೂರು.

ಪ್ರತಿಯನ್ನು ಅವಗಾಹನೆಗಾಗಿ ಸಲ್ಲಿಸಿದೆ.

ಅಪರ ಮುಖ್ಯ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.